**3** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ**.,**ರವರ ನ್ಯಾಯಾಲಯ**,** ಕಡೂರು
<u>ಸಿ.ಸಿ.ನಂ**. 854/2025**</u>

ದಿನಾಂಕಃ **25.11.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು**.**

| | | |
|---|---|---|
| ಸಾಕ್ಷಿಯ ಹೆಸರು | ಆಲ್ವಿನ್ | ಚಾಸಾ-3, ಪ್ರಾಸ-2 |
| ತಂದೆಯ ಹೆಸರು | ಗಿರೀಶ್ | |
| ವಯಸ್ಸು | 22 ವರ್ಷ | |
| ಉದ್ಯೋಗ | ಖಾಸಗಿ ಉದ್ಯೋಗ | |
| ವಾಸ | ಬೀರೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

ಚಾಸಾ-2 ನನಗೆ ಗೊತ್ತು. ಆರೋಪಿ ನನಗೆ ಗೊತ್ತಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇಲ್ಲಾ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಈ ಸಂಬಂಧ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿ ನಿಪಿ-1 ರ ಪೋಲಿಸ್ ನೋಟಿಸಿನಲ್ಲಿ ತನ್ನ ಸಹಿ ನೋಡಿ ಗುರುಸಿತಿಸಿದ್ದು ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-2 ರ ಮಹಜರ್ ನಲ್ಲಿ ತನ್ನ ಸಹಿ ನೋಡಿ ಗುರುಸಿತಿಸಿದ್ದು ಸಾಕ್ಷಿ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಸಹಿಗಳನ್ನು ಯಾವಾಗ ಮತ್ತು ಎಲ್ಲಿ ಹಾಕಿರುತ್ತೇನೆ ಎಂದು ಗೊತ್ತಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ತಿಳಿದಿಲ್ಲ. ಸಾಕ್ಷಿಗೆ ನ್ಯಾಯಾಲಯದ ಮುಂದಿರುವ ಮುಮಾ-1 ನ್ನು ತೋರಿಸಲಾಗಿ ಅದಕ್ಕೆ ಅಂಟಿಸಿರುವ ಚೀಟಿಯಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಸಾಕ್ಷಿ ಸಹಿಯನ್ನು ಮುಮಾ-1(ಬಿ) ಎಂದು ಗುರುತಿಸಲಾಯಿತು. ಅದನ್ನು ಎಲ್ಲಿಂದ ಮತ್ತು ಯಾವಾಗ ವಶಪಡಿಸಿಕೊಳ್ಳಲಾಯಿತು ಎಂದು ನನಗೆ ಗೊತ್ತಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ**,** ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

<u>ಪಾಟೀಸವಾಲುಃ ಮಾನ್ಯ ಸಸಅ**.** ರವರಿಂದ ಃ</u>

ದಿಃ 26.12.2024 ರಂದು ನನಗೆ ಮತ್ತು ಚಾಸಾ-2 ರವರಿಗೆ ಪೋಲಿಸರು ನಿಪಿ-1 ರಂತೆ ನೋಟಸು ನೀಡಿ ಅಬಕಾರಿ ದಾಳಿಗೆ ಸಹಕರಿಸುವಂತೆ ಕೋರಿರುತ್ತಾರೆ ಎಂದರೆ ಸರಿಯಲ್ಲ. ನಾವುಗಳು ಒಪ್ಪಿ ಅಜ್ಜಂಪುರಕ್ಕೆ ಹೋಗುವ ಪ್ಲ್ಯ ಓವರ್ ಬಳಿ ಇರುವ ಸರ್ವಿಸ್ ರಸ್ತೆಗೆ ಹೋಗಿ ನಮ್ಮಗಳ ಸಮಕ್ಷಮ

ಪೋಲಿಸರು ಆರೋಪಿಯಿಂದ ನ್ಯಾಯಾಲಯದ ಮುಂದಿರುವ ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿದ್ದ 90 ಎಂಎಲ್ ನ ರಾಜಾವಿಸ್ಕಿ ಎಂದು ಬರೆದಿರುವ 45 ಪೌಚುಗಳನ್ನು ನಿಪಿ-2 ರ ಮಹಜರ್ ನಂತೆ ಮಧ್ಯಾಹ್ನ 12.00 ರಿಂದ 1.00 ಗಂಟೆ ವರೆಗೆ ಮಹಜರ್ ಜರುಗಿಸಿ ವಶಪಡಿಸಿಕೊಂಡು ನಿಪಿ-3 ರಂತೆ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು ದಿಃ 27.12.2024 ರಂದು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.